ಗಂಗಾ–ಕಲ್ಯಾಣ ಯೋಜನೇತರ ಕೊಳವೆ ಬಾವಿಗಳ ಹಂಚಿಕೆ

2639 (3173); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ)

ಅ) ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊಳವೆಬಾವಿಗಳನ್ನು ಯಾವ ಮಾನದಂಡದ ಮೇಲೆ ಹಂಚಿಕೆ ಮಾಡಲಾಗುತ್ತಿದೆ; (ವಿವರ ನೀಡುವುದು)

ಆ) 2014–15ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗಳು ಉಪಯೋಗ ಪಡೆದಿದ್ದಾರೆ (ವಿವರ ಒದಗಿಸುವುದು) ಹಾಗೂ ಇನ್ನೂ ಹೆಚ್ಚಿನ ಫಲಾನುಭವಿಗಳಿಗೆ ಕೊಳವೆಬಾವಿಗಳನ್ನು ಹಂಚಿಕೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ (ವಿವರ ಒದಗಿಸುವುದು);

ಇ) ಯಾವ ಮಾನದಂಡದ ಮೇಲೆ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು ?

ಶ್ರೀ H. ಆಂಜನೇಯ (ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಗಂಗಾ ಕಲ್ಯಾಣ ಯೋಜನೆಯನ್ನು ಮಂಜೂರು ಮಾಡಲಾಗುತ್ತಿದ್ದು, ವಿಧಾನ ಸಭಾ ಕ್ಷೇತ್ರದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನಸಂಖ್ಯೆಯ ಆಧಾರದ ಮೇಲೆ ಹಂಚಿಕೆ ಮಾಡಲಾಗುತ್ತಿದೆ.

ಆ) **ಡಾ॥ ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ:** 2014–15ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿನ ಬೀದರ್ ದಕ್ಷಿಣ ವಿಧಾನಸಭೆ ಕ್ಷೇತ್ರಕ್ಕೆ 64 ಗುರಿ ನಿಗಧಿಪಡಿಸಲಾಗಿದೆ. ಈ ಬಾವಿಗಳನ್ನು ಕೊರೆಯಲು ಟೆಂಡರ್ ಕರೆಯಲಾಗಿದೆ. ಇನ್ನೂ ಹೆಚ್ಚಿನ ಕೊಳವೆಬಾವಿಗಳನ್ನು ಹಂಚಿಕೆ ಮಾಡುವ ಪ್ರಸ್ತಾವನೆ ಇರುವುದಿಲ್ಲ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ: 2014–15 ನೇ ಸಾಲಿನಲ್ಲಿ ಬೀದರ್ ದಕ್ಷಿಣ ಕ್ಷೇತ್ರಕ್ಕೆ 51

ಕೊಳವೆಬಾವಿಗಳ ಗುರಿ ನೀಡಲಾಗಿದೆ. ಹೆಚ್ಚಿನ ಫಲಾನುಭವಿಗಳಿಗೆ ಕೊಳವೆಬಾವಿಗಳನ್ನು ಹಂಚಿಕೆ ಮಾಡುವ ಪ್ರಸ್ತಾವನೆ ನಿಗಮದ ಮುಂದಿರುವುದಿಲ್ಲ.

ಇ) **ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಈ ಕೆಳಕಂಡಂತೆ ಮಾನದಂಡಗಳನ್ನು ಫಲಾಪೇಕ್ಷಿಗಳು ಹೊಂದಿರಬೇಕು.**

1) ಫಲಾಪೇಕ್ಷಿಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು.

2) ಅರ್ಜಿದಾರರು 18 ರಿಂದ 60 ವರ್ಷದೊಳಗಿನ ವಯೋಮಾನದವರಾಗಿರಬೇಕು.

3) ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಮಾತ್ರ ಸೌಲಭ್ಯ ಕಲ್ಪಿಸಲಾಗುವುದು.

4) ಅರ್ಜಿದಾರರ ಕುಟುಂಬದಲ್ಲಿ ಯಾವುದೇ ಸದಸ್ಯರು ಸರ್ಕಾರಿ ಸಂಸ್ಥೆಯಲ್ಲಿ ನೌಕರಿಯಲ್ಲಿರಬಾರದು.

5) ಅರ್ಜಿದಾರರು ಈ ಹಿಂದೆ ನಿಗಮದಿಂದ ಯಾವುದೇ ಸೌಲಭ್ಯ ಪಡೆದಿರಬಾರದು.

6) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ₹ 81,000/– ರಿಂದ ₹ 1,03,000/– ಗಳವರೆಗೆ ಅನ್ವಯವಾಗುತ್ತದೆ.

ಎಸ್.ಇ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯಲ್ಲಿ ಹಣ ಬಿಡುಗಡೆ

2641 (3217); ಶ್ರೀ ಅಶೋಕ್ ಖೇಣಿ (ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರ)

ಅ) ಎಸ್.ಇ.ಪಿ ಮತ್ತು ಟಿ.ಎಸ್.ಪಿ ಯೋಜನೆಯಲ್ಲಿ (2014–15) ವಿವಿಧ ಇಲಾಖೆಗಳ ಅನುದಾನವನ್ನು ಯೋಜನಾ ಇಲಾಖೆಯಿಂದ ಬಿಡುಗಡೆ ಮಾಡುತ್ತಿರುವುದು ನಿಜವೇ;